ಈ) ಈ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು) :

ಅ) ಮಾರ್ಚ್ 2001.

ಆ) ರೂ. 116.50 ಲಕ್ಷಗಳು

ಇ) ಭೂಸ್ವಾಧೀನ ಕಾರಣದಿಂದ ಕಾಮಗಾರಿ ಸ್ಥಗಿತಗೊಂಡಿದೆ.

ಈ) ಭೂಸ್ವಾಧೀನ ಸಮಸ್ಯೆ ಇತ್ಯರ್ಥವಾದ ಕೂಡಲೇ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು.

5399(6271) ಶ್ರೀ ನಿಂಗಪ್ಪ ಹೆಚ್. (ಕುಣಿಗಲ್) : ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಕುಣಿಗಲ್ ತಾಲ್ಲೂಕು ಇಪ್ಪಾಡಿ ಗ್ರಾಮದ ಸಮೀಪವಿರುವ ಮುದ್ದರಂಗದ ಕೆರೆ ನಿರ್ಮಾಣಕ್ಕೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದರೂ ಇದುವರೆವಿಗೂ ಕ್ರಮ ಕೈಗೊಂಡು ಮಂಜೂರಾತಿ ನೀಡಿಲ್ಲದಿರುವುದಕ್ಕೆ ಕಾರಣವೇನು;

ಆ) ಅಡೆತಡೆಗಳಿದ್ದಲ್ಲಿ, ಅವುಗಳನ್ನು ಬಗೆಹರಿಸಿ ಸರ್ಕಾರ ಸದರಿ ಕೆರೆ ನಿರ್ಮಾಣಕ್ಕೆ ಮಂಜೂರಾತಿ ನೀಡುವುದೇ;

ಇ) ಯಾವ ಅವಧಿಯೊಳಗಾಗಿ ಮಂಜೂರಾತಿ ನೀಡಿ ಕಾರ್ಯಾರಂಭ ಮಾಡಲಾಗುವುದು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು) :

ಅ) ಈ ಕೆರೆ ನಿರ್ಮಾಣಕ್ಕೆ ಬೇಕಾದ 28 ಎಕರೆ ಜಮೀನು ಅರಣ್ಯ ಇಲಾಖೆಯಿಂದ ಪಡೆಯಬೇಕಾಗಿದೆ. ಸಧ್ಯಕ್ಕೆ ಭೂಮಿ ಮತ್ತು ಅನುದಾನ ಲಭ್ಯವಿಲ್ಲದ ಕಾರಣ ಮಂಜೂರಾತಿ ನೀಡಿಲ್ಲ.

ಆ, ಇ) ಅರಣ್ಯ ಇಲಾಖೆಯಿಂದ ಮೇಲ್ಕಂಡ ಜಮೀನನ್ನು ಪಡೆದ ನಂತರ ಮಂಜೂರಾತಿ ಬಗ್ಗೆ ಪರಿಶೀಲಿಸಲಾಗುವುದು.

5401(6273) ಶ್ರೀ ನಿಂಗಪ್ಪ ಹೆಚ್ (ಕುಣಿಗಲ್) : ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಕುಣಿಗಲ್‌ನಲ್ಲಿ ಒಂದು ಹಿರಿಯ ಶ್ರೇಣಿ ಮತ್ತು ಎರಡು ಕಿರಿಯ ಶ್ರೇಣಿ ನ್ಯಾಯಾಲಯಗಳಿದ್ದು ಅವುಗಳಿಗೆ ಅವಶ್ಯಕ ಕಟ್ಟಡ ಮತ್ತು ಪೀಠೋಪಕರಣಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಅವಶ್ಯಕ ಸೌಲಭ್ಯಗಳನ್ನು ಕಲ್ಪಿಸಿಕೊಡಲು ಸರ್ಕಾರ ಕೈಗೊಂಡಿರುವ ಕ್ರಮವೇನು:

ಇ) ಅವಶ್ಯಕ ಸೌಲಭ್ಯಗಳನ್ನು ಈ ನ್ಯಾಯಾಲಯಗಳಿಗೆ ಯಾವಾಗ ಕಲ್ಪಿಸಿಕೊಡಲಾಗುವುದು.

ಶ್ರೀ ಎಚ್.ಕೆ. ಪಾಟೀಲ್ (ಕಾನೂನು ಮತ್ತು ಸಂಸದೀಯಗಳ ವ್ಯವಹಾರ ಸಚಿವರು) :

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ

5402(6274) ಶ್ರೀ ನಿಂಗಪ್ಪ ಹೆಚ್. (ಕುಣಿಗಲ್) : ಮಾನ್ಯ ಪೌರಾಡಳಿತ ಹಾಗೂ ಕೆಯುಐಡಿಎಫ್‌ಸಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?